I/428847/2023

ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/ 90/ಸಿಡಿಸಿ(2)/2022(C-583569)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:16/05/2023.

**:ಸುತ್ತೋಲೆ:**

ವಿಷಯ: ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಉಪನ್ಯಾಸಕರು / ಸಹಾಯಕ ಪ್ರಾಧ್ಯಾಪಕರುಗಳ ಉನ್ನತ ವ್ಯಾಸಂಗದ ವಿವರಗಳನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: ಡಿಟಿಇ / 90 / ಸಿಡಿಸಿ(2) / 2021 ದಿನಾಂಕ :24-09-2021 / 04-08-2022

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ/ ಅನುದಾನಿತ ಇಂಜಿನಿಯರಿಂಗ್ ಕಾಲೇಜು /ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ವರ್ಗದವರು ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್ ಹಾಗೂ ಪಿಹೆಚ್.ಡಿ ಉನ್ನತ ವ್ಯಾಸಂಗಕ್ಕಾಗಿ ನಿಯೋಜನೆ ಹೊಂದಿದ ನಂತರ ನಿಯಮಾನುಸಾರ 6 ತಿಂಗಳಿಗೊಮ್ಮೆ ವ್ಯಾಸಂಗದ ಪ್ರಗತಿಯನ್ನು ಹಾಗೂ ಪ್ರತಿ ತಿಂಗಳಿಗೊಮ್ಮೆ ಹಾಜರಾತಿಯ ಪ್ರಮಾಣ ಪತ್ರಗಳನ್ನು ಮಾತೃ ಸಂಸ್ಥೆಗೆ ಸಂಬಂಧಿಸಿದ ದಾಖಲೆಗಳೊಂದಿಗೆ ತಪ್ಪದೆ ಸಲ್ಲಿಸಬೇಕಾಗಿರುತ್ತದೆ. ಸಂಸ್ಥೆಯ ಪ್ರಾಂಶುಪಾಲರು ಉನ್ನತ ವ್ಯಾಸಂಗಕ್ಕಾಗಿ ನಿಯೋಜಿತರಾಗಿರುವ ಬೋಧಕ ಸಿಬ್ಬಂದಿಯವರ ವ್ಯಾಸಂಗದ ಪ್ರಗತಿ ಹಾಗೂ ಹಾಜರಾತಿಯ ವಿವರವನ್ನು ಇಲಾಖೆಗೆ ಕಾಲಕಾಲಕ್ಕೆ ಸಲ್ಲಿಸಲು ಮತ್ತು ನಿಯಮಿತವಾಗಿ https:dtetech.karnataka.gov.in/dteone/emp/login.aspx ಪೋರ್ಟಲ್ ನಲ್ಲಿ ನಮೂದಿಸಲು ತಿಳಿಸಲಾಗಿದೆ.

ಮುಂದುವರೆದು, ಪೂರ್ಣಕಾಲಿಕ ನೆಲೆಯಲ್ಲಿ ಎಂ.ಟೆಕ್ / ಪಿಹೆಚ್.ಡಿ ವ್ಯಾಸಂಗಕ್ಕೆ ನಿಯೋಜಿತರಾದ ಉಪನ್ಯಾಸಕರು / ಸಹಾಯಕ ಪ್ರಾಧ್ಯಾಪಕರು ನಿಯಮಾನುಸಾರ ಉನ್ನತ ವ್ಯಾಸಂಗದಲ್ಲಿ ನಿರೀಕ್ಷಿತ ಪ್ರಗತಿಯನ್ನು ಸಾಧಿಸಿಲ್ಲದಿದ್ದರೆ ಅಥವಾ ನಿಗದಿತ ಕಾಲಮಿತಿಯೊಳಗೆ ವ್ಯಾಸಂಗವನ್ನು ಪೂರ್ಣಗೊಳಿಸದಿದ್ದಲ್ಲಿ ಅಥವಾ ಉನ್ನತ ವ್ಯಾಸಂಗಕ್ಕೆ ಬಿಡುಗಡೆ ಹೊಂದಿ ವ್ಯಾಸಂಗ ಪೂರ್ಣಗೊಳಿಸದೆ ಮಾತೃ ಸಂಸ್ಥೆಯಲ್ಲಿ ವರದಿ ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿದ್ದರೆ ಅಂತಹ ಬೋಧಕ ವರ್ಗದವರ ವಿವರಗಳನ್ನು ಅಗತ್ಯ ದಾಖಲೆಗಳೊಂದಿಗೆ ದಿನಾಂಕ : 26-05-2023 ರೊಳಗೆ ಇಲಾಖೆಗೆ ಸಲ್ಲಿಸುವಂತೆ ಸಂಸ್ಥೆಯ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ. ಉನ್ನತ ವ್ಯಾಸಂಗದ ವಿವರಗಳನ್ನು ಇಲಾಖೆಯ ಗಮನಕ್ಕೆ

ಕಾಲಕಾಲಕ್ಕೆ ತರದಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧ ಪಟ್ಟ ಸಂಸ್ಥೆಯ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆ.

ಜಂಟಿ ನಿರ್ದೇಶಕರು(ಸಿಡಿಸಿ).

ಇವರಿಗೆ:

1. ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ - ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗಕ್ಕೆ - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.